## ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/ಶೈವಿ/12/ಸ್ನಾ.ಶು/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:12.07.2022

2022-23ನೇ ಶೈಕ್ಷಣಿಕ ಸಾಲಿಗೆ ಕೆಲವು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಾರಂಭಿಸಲಾಗಿರುವ ವಿವಿಧ ಸ್ನಾತಕೋತ್ತರ ಕೋರ್ಸುಗಳಿಗೆ ಶುಲ್ಕ ನಿಗದಿಪಡಿಸುವ ಬಗ್ಗೆ ಆದೇಶಿಸಲಾಗಿರುವ ಸರ್ಕಾರದ ಆದೇಶ ಸಂಖ್ಯೆ: ಇಡಿ 177 ಯುಎನ್ಇ 2022 ಬೆಂಗಳೂರು, ದಿನಾಂಕ:30.06.2022 ನ್ನು ಕೆಳಕಂಡವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ರವಾನಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

ರಾಜ್ಯದ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

ಪ್ರತಿಯನ್ನು:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತಶಾಖೆ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-01.
4. ಆಯುಕ್ತರು, ನಿರ್ದೇಶಕರು, ಹೆಚ್ಚುವರಿ ನಿರ್ದೇಶಕರು, ಮುಖ್ಯ ಆಡಳಿತಾಧಿಕಾರಿಗಳ ಆಪ್ತಶಾಖೆ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ ಬೆಂಗಳೂರು.
5. ಕಛೇರಿ ಪ್ರತಿ.

ವಿಷಯ: [illegible]

ಓದಲಾಗಿದೆ:
1. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ ಇವರ ಪತ್ರ ಸಂಖ್ಯೆ: ಕಾಶಿಇ/ಶೈಪಿ/12/ಪದವಿ ಶುಲ್ಕ/2022-23 ದಿನಾಂಕ: 06-06-2022
2. ಸರ್ಕಾರದ ಆದೇಶ ಸಂಖ್ಯೆ: ಇಡಿ 176 ಯುಎನ್ಇ 2021, ದಿನಾಂಕ: 28-07-2021.

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ದಿನಾಂಕ: 06.06.2022ರ ಪತ್ರದಲ್ಲಿ, ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ ಇವರು 2022-23ನೇ ಶೈಕ್ಷಣಿಕ ಸಾಲಿನಲ್ಲಿ ಸ್ನಾತಕೋತ್ತರ ಪದವಿ ತರಗತಿಗಳಿಗೆ ಪ್ರವೇಶಾತಿ ಪ್ರಕ್ರಿಯೆಗಳು 2022ರ ಪದವಿ ಪರೀಕ್ಷೆಯ ಫಲಿತಾಂಶಗಳ ನಂತರ ಪ್ರಾರಂಭವಾಗಲಿದ್ದು, ಅದಕ್ಕೂ ಮುಂಚಿತವಾಗಿಯೇ ಶುಲ್ಕ ವಿನ್ಯಾಸದ ಪಟ್ಟಿಯ ಆದೇಶ/ಸುತ್ತೋಲೆಯನ್ನು ಕಾಲೇಜುಗಳಿಗೆ ಆದೇಶಿಸಲಾಗುತ್ತಿತ್ತು.

ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಕೆಲವು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಾರಂಭಿಸಲಾಗಿರುವ ವಿವಿಧ ಸ್ನಾತಕೋತ್ತರ ಪದವಿ ತರಗತಿಗಳಿಗೆ (ಎಂ.ಬಿ.ಎ., ಮತ್ತು ಎಂ.ಸಿ.ಎ ಸ್ನಾತಕೋತ್ತರ ಕೋರ್ಸುಗಳನ್ನು ಒಳಗೊಂಡಂತೆ) 2021-22ನೇ ಶೈಕ್ಷಣಿಕ ಸಾಲಿಗೆ ಶುಲ್ಕ ನಿಗಧಿಪಡಿಸಲಾದಂತೆ 2022-23ನೇ ಸಾಲಿಗೂ ಸಹ ಮುಂದುವರೆಸುವ ಅಥವಾ ಶುಲ್ಕಗಳನ್ನು ಹೆಚ್ಚಿಸಲು ಸರ್ಕಾರವು ಇಚ್ಛಿಸಿದಲ್ಲಿ, ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಹಾಗೂ ವಿದ್ಯಾರ್ಥಿ ಪೋಷಕರಿಗೆ ಹೆಚ್ಚಿನ ಆರ್ಥಿಕ ಹೊರೆಯಾಗದಂತೆ ಸರ್ಕಾರದಿಂದ ಅತಿ ಕನಿಷ್ಠ ಪ್ರಮಾಣದಲ್ಲಿ ಪರಿಷ್ಕರಿಸಿ ಶುಲ್ಕ ವಿನ್ಯಾಸದ ಆದೇಶ/ಅನುಮತಿ ಕೋರಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2) ದಿನಾಂಕ::28.07.2021ರ ಆದೇಶದಲ್ಲಿ, ಕೋವಿಡ್ -19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಆರ್ಥಿಕ ಇಲಾಖೆಯು 2019-20 ನೇ ಸಾಲಿನಲ್ಲಿ ನಿಗಧಿಪಡಿಸಿದ ಶುಲ್ಕವನ್ನೇ 2020-21ನೇ ಸಾಲಿಗೆ ನಿಗಧಿಪಡಿಸಿದ್ದು, ನಂತರ ಈ ಶುಲ್ಕವನ್ನ 2021-22 ನೇ ಸಾಲಿಗೂ ಅನ್ವಯಿಸುವಂತೆ ನಿಗಧಿಪಡಿಸಿ ಆದೇಶಿಸಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ದಿನಾಂಕ:28.07.2021 ರಲ್ಲಿ 2021-22 ನೇ ಸಾಲಿಗೆ ನಿಗಧಿಪಡಿಸಿದ ಶುಲ್ಕವನ್ನೇ, 2022-23 ನೇ ಸಾಲಿಗೂ ನಿಗಧಿಪಡಿಸಲು ನಿರ್ಧರಿಸಿ, ಅದರಂತೆ, ಈ ಕೆಳಕಂಡ ಆದೇಶ.

## <u>ಸರ್ಕಾರಿ ಆದೇಶ ಸಂಖ್ಯೆ: ಇಡಿ 177 ಯುಎನ್ಇ 2022, ಬೆಂಗಳೂರು, ದಿನಾಂಕ:30-06-2022</u>

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಕೆಲವು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಾರಂಭಿಸಲಾಗಿರುವ ವಿವಿಧ ಸ್ನಾತಕೋತ್ತರ ಪದವಿ ತರಗತಿಗಳಿಗೆ (ಎಂ.ಬಿ.ಎ., ಮತ್ತು ಎಂ.ಸಿ.ಎ ಸ್ನಾತಕೋತ್ತರ ಕೋರ್ಸುಗಳನ್ನು ಒಳಗೊಂಡಂತೆ) 2021-22ನೇ

....2

ಸ್ನಾತಕೋತ್ತರ ಕೋರ್ಸುಗಳ ಶುಲ್ಕದ ವಿವರ: (ಎಂ.ಬಿ.ಎ ಹೊರತುಪಡಿಸಿ)

| ಕ್ರ. ಸಂ. | ವಿವರ | 2022-23ನೇ ಸಾಲಿಗೆ ನಿಗಧಿಪಡಿಸಬೇಕಾಗಿರುವ ಶುಲ್ಕ |
|---|---|---|
| 1 | ಅರ್ಜಿ ಶುಲ್ಕ | 50-00 |
| 2 | ಪ್ರವೇಶ ಶುಲ್ಕ | 100-00 |
| 3 | ಪಾಠ ಶುಲ್ಕ | 1000-00 |
| 4 | ಪ್ರಯೋಗಾಲಯ ಶುಲ್ಕ | 300-00 |
| 5 | ವೈದ್ಯಕೀಯ ತಪಾಸಣಾ ಶುಲ್ಕ | 30-00 |
| 6 | ವರ್ಗಾವಣೆ ಶುಲ್ಕ | 50-00 |
| 7 | ವಿದ್ಯಾಭ್ಯಾಸ ಪ್ರಮಾಣ ಪತ್ರ | 20-00 |
| 8 | ವಾಚನಾಲಯ ಶುಲ್ಕ | 100-00 |
| 9 | ಕ್ರೀಡಾ ಶುಲ್ಕ | 100-00 |
| 10 | ಗ್ರಂಥಾಲಯ ಶುಲ್ಕ (ಬೈಂಡಿಂಗ್ ಸೇರಿ) | 100-00 |
| 11 | ಸ್ನಾತಕೋತ್ತರ ವಿಭಾಗ ಅಭಿವೃದ್ಧಿ ಶುಲ್ಕ | 1000-00 |
| 12 | ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ನಿಧಿ | (ಸಾರ್ವಜನಿಕ ಶಿಕ್ಷಣ ಇಲಾಖೆಯ ಶುಲ್ಕ ನಿಗಧಿಪಡಿಸಿದಂತೆ) |
| 13 | ಅಧ್ಯಾಪಕರ ಸಹಾಯ ನಿಧಿ | |
| 14 | ಪ್ರವೇಶ ಶುಲ್ಕ | ಆಯಾ ವಿಶ್ವವಿದ್ಯಾಲಯಗಳು ಶುಲ್ಕ ನಿಗಧಿಪಡಿಸಿದಂತೆ |
| 15 | ನೋಂದಣಿ ಶುಲ್ಕ | |
| 16 | ಪರೀಕ್ಷಾ ಶುಲ್ಕ | |
| 17 | ಇನ್ನಿತರೆ ವಿಶ್ವವಿದ್ಯಾಲಯ ಶುಲ್ಕ | |

ಎಂ.ಬಿ.ಎ. ಕೋರ್ಸಿನಲ್ಲಿ ವ್ಯಾಸಂಗ ಮಾಡುತ್ತಿರುವ ಸಾಮಾನ್ಯ ವಿದ್ಯಾರ್ಥಿಗಳಿಗೆ ಸರ್ಕಾರವು ಹಿಂದಿನ ಶೈಕ್ಷಣಿಕ ಸಾಲುಗಳಲ್ಲಿ ನಿಗಧಿಪಡಿಸಲಾಗಿದ್ದ ವಾರ್ಷಿಕ ರೂ. 20,000/-ಗಳ ಶುಲ್ಕವನ್ನೇ 2022-23ನೇ ಶೈಕ್ಷಣಿಕ ಸಾಲಿಗೆ ನಿಗಧಿಪಡಿಸಲಾಗಿದೆ.

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಾರಂಭಿಸಲಾಗಿರುವ ಎಂ.ಬಿ.ಎ., ಮತ್ತು ಎಂ.ಸಿ.ಎ ಸ್ನಾತಕೋತ್ತರ ಕೋರ್ಸುಗಳು ಸೇರಿದಂತೆ, ವಿವಿಧ ಸ್ನಾತಕೋತ್ತರ ಕೋರ್ಸುಗಳಿಗಾಗಲೀ ಹಾಗೂ ಈ ಸಂಬಂಧ ಯಾವುದೇ ಚಟುವಟಿಕೆಗಳಿಗಾಗಲಿ ಹೆಚ್ಚುವರಿ ಅನುದಾನವನ್ನು ಕೋರಬಾರದು ಎಂಬ ಷರತ್ತಿಗೊಳಪಟ್ಟು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶೀತಲ್ ಎಂ. ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-1).

**ಇವರಿಗೆ:**

1. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು 560 001.

....3